ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೧೪

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೊಂಬತ್ತನೇ ಅಧಿವೇಶನ

## ಗುರುವಾರ, ದಿನಾಂಕ: ೧೬ನೇ ಜುಲೈ ೨೦೧೫

---

### ಸಮೂಹ – IV

೧. ಮುಖ್ಯಮಂತ್ರಿಗಳು

೨. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

---

### ದೇವಸ್ಥಾನಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೬ (೧೩೪೮) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ಮುಜರಾಯಿ (ಧಾರ್ಮಿಕ ದತ್ತಿ) ಇಲಾಖೆಯ ವ್ಯಾಪ್ತಿಗೊಳಪಡುವ ದೇವಸ್ಥಾನಗಳ ಸಂಖ್ಯೆ ಎಷ್ಟು ; ಅವು ಯಾವುವು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ಮುಜರಾಯಿ (ಧಾರ್ಮಿಕ ದತ್ತಿ) ಇಲಾಖೆಯ ವ್ಯಾಪ್ತಿಗೊಳಪಡುವ ದೇವಸ್ಥಾನಗಳ ನಿರ್ವಹಣೆಗೆ ಸರ್ಕಾರ ನೀಡುತ್ತಿರುವ ಹಣವೆಷ್ಟು ; (ವಿವರಗಳನ್ನು ನೀಡುವುದು)

(ಇ) ಈ ದೇವಸ್ಥಾನಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಕಳೆದ ೨ ವರ್ಷಗಳಲ್ಲಿ ಒದಗಿಸಲಾದ ಮೊತ್ತವೆಷ್ಟು ; ಖರ್ಚು ಮಾಡಲಾದ ಮೊತ್ತವೆಷ್ಟು ; ಪ್ರಸ್ತುತ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು)

(ಈ) ರಾಜ್ಯದ ಮುಜರಾಯಿ (ಧಾರ್ಮಿಕ ದತ್ತಿ) ಇಲಾಖೆಯ ವ್ಯಾಪ್ತಿಗೊಳಪಡುವ ದೇವಸ್ಥಾನಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅರ್ಚಕರಿಗೆ ನೀಡಲಾಗುತ್ತಿರುವ ಗೌರವಧನವೆಷ್ಟು ?

## ಮೈಸೂರು ನಗರದಲ್ಲಿ ಜೆ–ನರ್ಮ್ ಕಾಮಗಾರಿಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೭ (೧೩೫೯) ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ನಗರದಲ್ಲಿ ಜೆ–ನರ್ಮ್ ಅನುದಾನದಿಂದ ನಡೆಯುತ್ತಿರುವ ಕಾಮಗಾರಿಗಳು ಯಾವುವು ; ಪ್ರತಿಯೊಂದು ಕಾಮಗಾರಿಯ ಹೆಸರು, ಆರಂಭವಾದ ದಿನಾಂಕ, ಮಂಜೂರಾಗಿರುವ ಅನುದಾನ, ಇದುವರೆಗೆ ಆಗಿರತಕ್ಕ ವೆಚ್ಚ, ಕಾಮಗಾರಿಯ ಹಂತ ಮುಕ್ತಾಯದ ಅವಧಿಯ ವಿವರಗಳನ್ನು ಒದಗಿಸುವುದು ;

(ಆ) ರಾಜಪಥ ಕಾಮಗಾರಿಯು ಕುಂಟುತ್ತಾ ಸಾಗಿದ್ದು, ಅರಮನೆಯ ಪೂರ್ವ ದಿಕ್ಕಿನ ಊಟಿ ರಸ್ತೆ, ಕೆ.ಆರ್. ಸರ್ಕಲ್‌ನಿಂದ ಬನುಮಯ್ಯ ಕಾಲೇಜಿನ ವರೆಗಿನ ಸಯ್ಯಾಜಿರಾವ್ ರಸ್ತೆಗಳಲ್ಲಿ ಈ ಕಾಮಗಾರಿಯಿಂದ ಸಂಚಾರಕ್ಕೆ ಅಡೆತಡೆ, ಟ್ರಾಫಿಕ್ ಜಾಮ್, ಸಾರ್ವಜನಿಕರ ಓಡಾಟಕ್ಕೆ ಅನಾನುಕೂಲ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮೇಲ್ಕಂಡ ಎಲ್ಲಾ ಕಾಮಗಾರಿಗಳನ್ನು ಆದಷ್ಟು ಬೇಗ ದಸರಾ ಹಬ್ಬದ ಒಳಗೆ ಮುಗಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ?

## ರಾಜ್ಯದ ವಿವಿಧ ಇಲಾಖೆಯಲ್ಲಿನ ಯೋಜನೆಗಳ ಅನುದಾನ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೧೯೮ (೧೭೨೭) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರದ ವಿವಿಧ ಇಲಾಖೆಯಡಿ ಬರುವ ಸ್ವಾಯತ್ತ ಸಂಸ್ಥೆಗಳು / ಬೋರ್ಡ್‌ಗಳು / ಕಾರ್ಪೋರೇಷನ್‌ಗಳು ಮತ್ತು ಸೊಸೈಟಿಗಳು ಅನುದಾನಿತ ಸಂಸ್ಥೆಗಳಲ್ಲಿ ಇರುವ ಸಿಬ್ಬಂದಿಗೆ ವೈದ್ಯಕೀಯ ಭತ್ಯೆ, ವೈದ್ಯಕೀಯ ವೆಚ್ಚ ಮರುಪಾವತಿ, ಜ್ಯೋತಿ ಸಂಜೀವಿನಿ ಯೋಜನೆಯಡಿ ತರಲಾಗಿದೆಯೇ ;

(ಆ) ಅನುದಾನಿತ ಮತ್ತು ಅನುದಾನ ರಹಿತ ಸಂಸ್ಥೆಗಳ ಸಿಬ್ಬಂದಿಗೆ ಯಾವುದೇ ರೀತಿಯ ವೈದ್ಯಕೀಯ ಭತ್ಯೆ, ಮರು ವೆಚ್ಚ, ಜ್ಯೋತಿ ಸಂಜೀವಿನಿ ಯೋಜನೆ ಇಲ್ಲದೆ ಸಮಸ್ಯೆಯಾಗಿರುವುದನ್ನು ಪರಿಹರಿಸಲು ಸರ್ಕಾರದ ಕ್ರಮವೇನು ?

## ಇರಾನಿ ಗ್ಯಾಂಗ್‌ನವರ ಉಪಟಳ ಕುರಿತು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯೯ (೧೭೭೧) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಇರಾನಿ ಗ್ಯಾಂಗ್ ಎಂದರೆ ಯಾರು ;

(ಆ) ಇವರು ರಾಜ್ಯದ ಯಾವ ಯಾವ ಜಿಲ್ಲೆಯಲ್ಲಿ ಕಂಡು ಬಂದಿರುತ್ತಾರೆ ; ಎಷ್ಟು ಮಂದಿ ಇರುತ್ತಾರೆ ;

(ಇ) ಇವರ ಗುರಿ ಏನು ; ಇವರು ಪೋಲೀಸಿನವರಿಗಿಂತ ಬಲಿಷ್ಟರೇ ; ಈ ಇರಾನಿ ಗ್ಯಾಂಗ್ ಅನ್ನು ಇನ್ನೂ ಏಕೆ ಬಂಧಿಸಿರುವುದಿಲ್ಲ ;

(ಈ) ಬೆಂಗಳೂರಿನಲ್ಲಿ ನಡೆಯುತ್ತಿರುವ ಸರಗಳ್ಳತನಕ್ಕೂ ಮತ್ತು ಈ ಇರಾನಿ ಗ್ಯಾಂಗಿಗೂ ಸಂಬಂಧವಿದೆಯೇ ? (ಪೂರ್ಣ ಮಾಹಿತಿ ನೀಡುವುದು)

## ಕೆರೆಗಳ ಅಭಿವೃದ್ಧಿ ಕುರಿತು

**ಶ್ರೀ ಅಶ್ವತ್‌ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೦೦ (೧೭೪೭) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಕೆರೆ ಅಭಿವೃದ್ಧಿ ಪ್ರಾಧಿಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ೨೦೧೩ನೇ ಸಾಲಿನಿಂದ ಇದುವರೆವಿಗೂ ಅಭಿವೃದ್ಧಿಪಡಿಸಿದ ಕೆರೆಗಳು ಯಾವುವು ;

(ಆ) ಅಭಿವೃದ್ಧಿಗಾಗಿ ಯಾವ ಯಾವ ವರ್ಷಗಳಲ್ಲಿ ಯಾವ ಯಾವ ಕೆರೆಗಳಿಗೆ ಯಾವ ಯಾವ ಇಲಾಖೆಯಿಂದ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ವಿಧಾನಸಭಾ ಕ್ಷೇತ್ರವಾರು ಅಭಿವೃದ್ಧಿ ಮಾಡಿರುವ ಕೆರೆಗಳ ವಿವರ ನೀಡುವುದು)

(ಇ) ಇತ್ತೀಚೆಗೆ ಬೆಂಗಳೂರಿನಲ್ಲಿ ಉಸ್ತುವಾರಿ ಸಚಿವರು ಸ್ಟೀಲ್ ಬ್ರಿಡ್ಜ್ ನಿರ್ಮಾಣ ಮಾಡಲಾಗುವುದು ಎಂದು ಹೇಳಿಕೆ ನೀಡಿದ್ದು, ಇದಕ್ಕೆ ಎಷ್ಟು ಹಣ ಮೀಸಲಿರಿಸಲಾಗಿದೆ ಮತ್ತು ಯಾವ ಯಾವ ಮೂಲಗಳಿಂದ ಹಣ ಒದಗಿಸಲಾಗಿದೆ ; (ಪೂರ್ಣ ವಿವರ ನೀಡುವುದು)

(ಈ) ಇದರ ಕಾಮಗಾರಿ ಯಾವಾಗ ಪ್ರಾರಂಭ ಮಾಡಲಾಗುವುದು ? (ವಿವರಿಸುವುದು)

## ಸರಗಳ್ಳತನ ಪ್ರಕರಣಗಳ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೨೦೧ (೧೭೫೮) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದಲ್ಲಿ ಅವ್ಯಾಹತವಾಗಿ ಸರಗಳ್ಳತನ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ೨ ವರ್ಷಗಳಿಂದ ಈಚೆಗೆ ಎಷ್ಟು ಸರಗಳ್ಳತನ ಪ್ರಕರಣಗಳು ಬೆಂಗಳೂರು ನಗರದಲ್ಲಿ ನಡೆದಿವೆ ; (ತಿಂಗಳವಾರು ವಿವರ ನೀಡುವುದು)

(ಇ) ಈ ಸರಗಳ್ಳತನ ಮಟ್ಟ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಬಿ.ಡಿ.ಎ. ಅವ್ಯವಹಾರ ಕುರಿತು

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು)–**

೨೦೨ (೧೭೩೧) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿದೆ ಎನ್ನಲಾದ ಅವ್ಯವಹಾರಗಳ ಪ್ರಕರಣಗಳ ಸಂಖ್ಯೆ ಎಷ್ಟು ; ಯಾವ ಯಾವ ಅಧಿಕಾರಿ ನೌಕರರ ಮೇಲೆ ಯಾವ ಯಾವ ಆರೋಪಗಳಿವೆ ; (ಹೆಸರು ಸಮೇತ ವಿವರ ಒದಗಿಸಿ)

(ಆ) ಎಷ್ಟು ಅಧಿಕಾರಿ/ನೌಕರರು ಲೋಕಾಯುಕ್ತ ಬಲೆಗೆ ಬಿದ್ದಿರುತ್ತಾರೆ ; ಅವರುಗಳ ಮೇಲೆ ಈವರೆವಿಗೆ ಕೈಗೊಂಡಿರುವ ಕ್ರಮಗಳೇನು ; (ಹೆಸರು ಸಮೇತ ವಿವರ ಒದಗಿಸುವುದು)

(ಇ) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರ ಮೇಲಿರುವ ಆರೋಪಗಳಾವುವು ; ಅವರ ಮೇಲೆ ಕೈಗೊಂಡಿರುವ ಕ್ರಮಗಳೇನು ? (ವಿವರ ಒದಗಿಸುವುದು)

## ಮೂಲಸೌಲಭ್ಯದ ಕೊರತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೨೦೩ (೧೭೫೦) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಯಲಹಂಕ ಉಪ ವಿಭಾಗದ ಕೆಂಪೇಗೌಡ ವಾರ್ಡ್ ನಂ–೧ರ ವ್ಯಾಪ್ತಿಯಲ್ಲಿ ಬರುವ ಮಾರುತಿನಗರ, ಕೂರ್ಲಪ್ಪ ಬಡಾವಣೆಯ ೭ನೇ ಅಡ್ಡರಸ್ತೆಯಲ್ಲಿ ಸುಮಾರು ೦೮ ತಿಂಗಳುಗಳಿಂದ ತೋಡಿರುವ ನೀರುಗಾಲುವೆಯ ಕಾಮಗಾರಿಯನ್ನು ಕೈಗೆತ್ತಿಕೊಳ್ಳದೆ ಇರಲು ಕಾರಣವೇನು ;

(ಆ) ಸದರಿ ಬಡಾವಣೆಯಲ್ಲಿ ಹಾದು ಹೋಗುವ ನೀರುಗಾಲುವೆಗಳೆಷ್ಟು ಹಾಗೂ ಅವುಗಳನ್ನು ಪ್ಲಾನ್ ರೀತ್ಯಾ ಕೈಗೊಳ್ಳಲಾಗಿದೆಯೇ ; ಕೈಗೊಂಡಿದ್ದಲ್ಲಿ, ಸದರಿ ಕಾಮಗಾರಿಯನ್ನು ಇದುವರೆವಿಗೂ ಕೈಗೆತ್ತಿಕೊಳ್ಳದಿರಲು ಕಾರಣವೇನು ; (ಸದರಿ ಬಡಾವಣೆಯಲ್ಲಿ ಹಾದು ಹೋಗುವ ನೀರುಗಾಲುವೆಗಳ ಪ್ಲಾನ್‌ಗಳನ್ನು ಒದಗಿಸುವುದು)

(ಇ) ಈ ಕಾಮಗಾರಿಯನ್ನು ಪ್ಲಾನ್ ರೀತ್ಯಾ ಕೈಗೊಳ್ಳದಿದ್ದಲ್ಲಿ, ಅಲ್ಲಿ ತೋಡಿರುವ ಕಾಲುವೆಯನ್ನು ಮುಚ್ಚಲು ಕ್ರಮ ಕೈಗೊಳ್ಳಲಾಗುವುದೇ ;

(ಈ) ಇದರಿಂದ, ಸದರಿ ರಸ್ತೆಯಲ್ಲಿ ವಾಸಿಸುತ್ತಿರುವ ಸಾರ್ವಜನಿಕರಿಗೆ ಆಗಿರುವ ತೊಂದರೆ, ಸೊಳ್ಳೆಗಳ ಹಾವಳಿ, ಹಾವುಗಳ ಓಡಾಟ ಹಾಗೂ ಗಿಡಗಳು ಬೆಳೆದು ನಡೆದಾಡಲೂ ತೊಂದರೆಯಾಗಿರುವುದಲ್ಲದೆ, ಸದರಿ ರಸ್ತೆಯಲ್ಲಿ ಯಾವುದೇ ಮೂಲಭೂತ ಸೌಕರ್ಯದ (ಮೋರಿ, ಡಾಂಬರೀಕರಣ ಹಾಗೂ ಹಾಲಿ ಸಾರ್ವಜನಿಕರುಗಳು ೦೮ ತಿಂಗಳುಗಳಿಂದ ತಾತ್ಕಾಲಿಕ ವಿದ್ಯುತ್ ಸಂಪರ್ಕವನ್ನು ಪಡೆದಿರುವುದು) ಕಾಮಗಾರಿಯೂ ನಡೆದಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಶೀಘ್ರವಾಗಿ ಕ್ರಮ ಕೈಗೊಳ್ಳುವುದೇ ?

## ಸರ್ಕಾರ ನೀಡಿರುವ ವಿವಿಧ ರೀತಿಯ ತನಿಖೆಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೨೦೪ (೧೩೫೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಈ ಸರ್ಕಾರ ಅಸ್ತಿತ್ವಕ್ಕೆ ಬಂದ ದಿನದಿಂದ ಇಲ್ಲಿಯವರೆಗೆ ಎಷ್ಟು ಪ್ರಕರಣಗಳನ್ನು ತನಿಖೆಗಾಗಿ ನ್ಯಾಯಾಂಗ ಆಯೋಗ, ಸಿ.ಓ.ಡಿ. ಮತ್ತು ಸಿ.ಬಿ.ಐ. ಸಂಸ್ಥೆಗಳಿಗೆ ವಹಿಸಲಾಗಿದೆ ; (ಪ್ರಕರಣವಾರು ವರ್ಷವಾರು ವಿವರ ನೀಡುವುದು)

(ಆ) ಆ ಪೈಕಿ ಎಷ್ಟು ಪ್ರಕರಣಗಳು ಇತ್ಯರ್ಥಗೊಂಡಿವೆ ; ತನಿಖೆಯು ಪ್ರಗತಿಯಲ್ಲಿರುವ ಪ್ರಕರಣಗಳು ಎಷ್ಟು ; (ವಿವರ ನೀಡುವುದು)

(ಇ) ವಿಚಾರಣೆ ಅಂತಿಮಗೊಂಡ ಎಷ್ಟು ಪ್ರಕರಣಗಳ ತನಿಖಾ ವರದಿಗಳು ಸರ್ಕಾರದ ಕೈಸೇರಿವೆ ; ಹಾಗಿದ್ದಲ್ಲಿ, ಯಾವುವು ; ಸದರಿ ತನಿಖಾ ವರದಿಗಳ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ; (ತನಿಖಾ ವರದಿಯಲ್ಲಿನ ಪ್ರಮುಖ ಅಂಶಗಳು ಹಾಗೂ ಕೈಗೊಂಡ ಕ್ರಮಗಳ ವಿವರ ನೀಡುವುದು)

(ಈ) ಬಾಕಿ ಇರುವ ಪ್ರಕರಣಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ;

(ಉ) ಪ್ರತಿಯೊಂದು ಪ್ರಕರಣವನ್ನು ಸಿ.ಬಿ.ಐ.ಗೆ ವಹಿಸುವ ತೀರ್ಮಾನ ಕೈಗೊಳ್ಳುವುದರಿಂದ ಸರ್ಕಾರದ ವರ್ಚಸ್ಸಿಗೆ ಹಾಗೂ ವಿಶ್ವಾಸಾರ್ಹತೆಗೆ ಅಡ್ಡಿಯಾಗುವುದು ಎಂದು ಸರ್ಕಾರ ಭಾವಿಸುವುದಿಲ್ಲವೇ ; ಹಾಗಾದರೆ ಸರ್ಕಾರದ ನಿಲುವೇನು ? (ವಿವರ ಒದಗಿಸುವುದು)

## ಮೈಸೂರು ಜಿಲ್ಲೆ ಹೆಚ್.ಡಿ.ಕೋಟೆ ತಾಲ್ಲೂಕಿನ ಭೀಮನಕೊಲ್ಲಿ ಮಹದೇಶ್ವರ ದೇವಸ್ಥಾನದ ಆವರಣದ ಯಾತ್ರಿ ನಿವಾಸ ಕಟ್ಟಡದ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೨೦೫ (೧೭೨೯) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮೈಸೂರು ಜಿಲ್ಲೆ ಹೆಚ್.ಡಿ.ಕೋಟೆ ತಾಲ್ಲೂಕಿನ ಭೀಮನಕೊಲ್ಲಿ ಮಹದೇಶ್ವರ ದೇವಸ್ಥಾನದ ಆವರಣದಲ್ಲಿ ಭಕ್ತಾದಿಗಳ ಸೌಕರ್ಯಕ್ಕಾಗಿ ಯಾತ್ರಿ ನಿವಾಸ ಕಟ್ಟಡ ಕಟ್ಟಲು ಮುಜರಾಯಿ ಇಲಾಖೆಯಿಂದ ಅನುಮೋದನೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಾದರೆ ಯಾವಾಗ ಅನುಮೋದನೆ ನೀಡಲಾಗಿದೆ ; ಇದರ ಅಂದಾಜು ಮೊತ್ತವೆಷ್ಟು ;

(ಇ) ಇದುವರೆವಿಗೂ ಸರ್ಕಾರ ಬಿಡುಗಡೆ ಮಾಡಿರುವ ಮೊತ್ತವೆಷ್ಟು ; ಹಾಗೂ ಈ ಯಾತ್ರಿ ನಿವಾಸ ಕಟ್ಟಡದ ಕಾಮಗಾರಿ ಯಾವ ಹಂತದಲ್ಲಿದೆ ;

(ಈ) ಬಾಕಿ ಬಿಡುಗಡೆಯಾಗದೆ ಕಾಮಗಾರಿ ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಾದರೆ ಬಾಕಿ ಮೊತ್ತ ಬಿಡುಗಡೆ ಮಾಡಿ, ಯಾವ ಕಾಲಮಿತಿಯಲ್ಲಿ ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು?

## ಮಹಿಳಾ ಪೌರಕಾರ್ಮಿಕರಿಗೆ ನೆರವು

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೨೦೬ (೧೭೩೦) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪೌರಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ ಮತ್ತು ನಿವೇಶನ ಹೊಂದಿರುವ ಪೌರಕಾರ್ಮಿಕರಿಗೆ ಮನೆ ನಿರ್ಮಾಣ ಮಾಡಲು ಧನ ಸಹಾಯ ನೀಡುವ ಯೋಜನೆಗಳು ಇವೆಯೇ ; ಇದ್ದಲ್ಲಿ, ಈ ಯೋಜನೆಯ ರೂಪುರೇಷೆಗಳು ಯಾವುವು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿರುವ ಪೌರಕಾರ್ಮಿಕರ ಸಂಖ್ಯೆ ಎಷ್ಟು ; (ಖಾಯಂ ಮತ್ತು ಗುತ್ತಿಗೆ ಕಾರ್ಮಿಕರು ಮತ್ತು ಮಹಿಳೆಯರ ವಿವರಗಳನ್ನು ನೀಡುವುದು)

(ಇ) ಈ ಪೌರಕಾರ್ಮಿಕರ ಪೈಕಿ ಮಕ್ಕಳ ಶಿಕ್ಷಣಕ್ಕೆ ಮತ್ತು ಮನೆ ನಿರ್ಮಾಣಕ್ಕೆ ಸಹಾಯ ಪಡೆದವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಮಹಿಳಾ ಪೌರಕಾರ್ಮಿಕರೇ ಹೆಚ್ಚಿನ ಪ್ರಮಾಣದಲ್ಲಿ ಇರುವ ಕಾರಣ ಈ ಯೋಜನೆಯ ಬಗ್ಗೆ ಹೆಚ್ಚಿನ ಪ್ರಚಾರದ ವ್ಯವಸ್ಥೆಮಾಡಿ, ಮತ್ತಷ್ಟು ಪೌರಕಾರ್ಮಿಕರು ಈ ಸೌಲಭ್ಯಗಳನ್ನು ಪಡೆಯುವಂತೆ ಮಾಡಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ?

## ಪೊಲೀಸ್ ಇಲಾಖೆಯಿಂದ ಅಮಾಯಕ ವ್ಯಕ್ತಿಯ ಮೇಲೆ ದೌರ್ಜನ್ಯ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೭ (೧೩೫೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲ್ಲೂಕಿನ ಸಿಂಗನಮಕ್ಕಿಯ ಅಮಾಯಕ ವ್ಯಕ್ತಿ ಮೇಲಿನ ಅಮಾನುಷ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಅಂಕೋಲಾ ಠಾಣೆಯಲ್ಲಿ ಪೊಲೀಸರ ವಿರುದ್ಧ ಪ್ರಕರಣ ದಾಖಲಾಗಿದ್ದರೂ ಇಲಾಖೆ ಯಾವುದೇ ಕ್ರಮ ಕೈಗೊಳ್ಳದೇ ದೌರ್ಜನ್ಯ ಎಸಗಿದ ಸಿ.ಪಿ.ಐ., ಹಾಗೂ ಇದರಲ್ಲಿ ಭಾಗಿಯಾಗಿರುವ ಎ.ಎಸ್.ಐ. ಕಾನ್‌ಸ್ಟೇಬಲ್‌ಗಳ ಮೇಲೆ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡುವ ಸಿದ್ಧತೆ ನಡೆದಿದೆ ಎನ್ನುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಅನಾವಶ್ಯಕವಾಗಿ ಅಮಾನುಷ ಹಲ್ಲೆ ಮಾಡಿದ ಸಿಬ್ಬಂದಿ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಈಗಾಗಲೇ ಹಲ್ಲೆಗೊಳಗಾದ ವ್ಯಕ್ತಿ ಅತ್ಯಂತ ಬಡವನಿದ್ದು, ಅವನ ವೈದ್ಯಕೀಯ ಚಿಕಿತ್ಸೆಯ ಹಣವನ್ನು ಸರ್ಕಾರ ಭರಿಸುವುದೇ? (ವಿವರ ನೀಡುವುದು)

## ರಾಜ್ಯದ ವಿವಿಧ ಹೆದ್ದಾರಿಗಳಲ್ಲಿನ ಸುಂಕವಸೂಲಿ ಕೇಂದ್ರಗಳಲ್ಲಿನ ಅಕ್ರಮಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೮ (೧೭೯೩) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದ ವಿವಿಧ ಹೆದ್ದಾರಿಗಳಲ್ಲಿರುವ ಸುಂಕ ವಸೂಲಿ ಕೇಂದ್ರ (Toll Gate) ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ವಿಳಾಸ ಮತ್ತು ಭಾವಚಿತ್ರವು ಸರ್ಕಾರದ ವಶದಲ್ಲಿದೆಯೇ ; ಇಲ್ಲವಾದಲ್ಲಿ, ವಶಕ್ಕೆ ತೆಗೆದುಕೊಳ್ಳಲಾಗುವುದೇ;

(ಆ) ಭಯೋತ್ಪಾದಕರಂತಿರುವ ಮತ್ತು ರೌಡಿಗಳು ಸುಂಕ ವಸೂಲಿ ಕೇಂದ್ರಗಳಲ್ಲಿ ಗುತ್ತಿಗೆ ಆಧಾರದಲ್ಲಿ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇಲ್ಲವಾದಲ್ಲಿ ತನಿಖೆ ನಡೆಸಲಾಗುವುದೇ ;

(ಇ) ಸುಂಕ ವಸೂಲಿ ಕೇಂದ್ರಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳು ಸುಂಕ ವಸೂಲಿ ನೆಪದಲ್ಲಿ ಪ್ರಯಾಣಿಕರು ಮತ್ತು ವಾಹನ ಚಾಲಕರ ಜೊತೆ ಅಸಭ್ಯವಾಗಿ ವರ್ತಿಸುವುದು ಹಾಗೂ ಕಿರುಕುಳ ನೀಡುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸಿದ್ದಲ್ಲಿ, ಇವರ ವಿರುದ್ಧ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ; ಇಲ್ಲವಾದಲ್ಲಿ ಕಾರಣವೇನು ;

(ಈ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿವಿಧ ಹೆದ್ದಾರಿಗಳಲ್ಲಿರುವ ಸುಂಕ ವಸೂಲಿ ಕೇಂದ್ರಗಳಲ್ಲಿ ಗಲಾಟೆ ನಡೆದ ಪ್ರಕರಣಗಳೆಷ್ಟು ; ಆ ಪೈಕಿ ದೂರು ದಾಖಲಾದ ಪ್ರಕರಣಗಳೆಷ್ಟು ; ಸುಂಕ ವಸೂಲಿ ಕೇಂದ್ರಗಳನ್ನು ತೆರವುಗೊಳಿಸಿದ ಪ್ರಕರಣಗಳೆಷ್ಟು ? (ವರ್ಷವಾರು, ಹೆದ್ದಾರಿವಾರು, ಪ್ರಕರಣವಾರು ವಿವರ ನೀಡುವುದು)

## ಗೋ ಸೇವಾ ಆಯೋಗ

**ಡಾ: ಎಂ.ಆರ್. ಹುಲಿನಾಯ್ಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦೯ (೧೭೬೨) ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಗೋ ಸೇವಾ ಆಯೋಗ ರಚನೆ ಆಗಿದೆಯೇ ;

(ಆ) ಸದರಿ ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು ಯಾರು ; (ವಿವರ ನೀಡುವುದು)

(ಇ) ಈ ಆಯೋಗದ ಕಾರ್ಯ ವಿಧಾನ ಮತ್ತು ಕರ್ತವ್ಯಗಳೇನು ? (ವಿವರ ನೀಡುವುದು)

## ಬಿ.ಡಿ.ಎ.ನಿಂದ ನಿರ್ಮಿಸಿರುವ ವಾಣಿಜ್ಯ ಸಂಕೀರ್ಣ ಕುರಿತು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೨೧೦ (೧೩೬೭) ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಂಗಳೂರು ನಗರದ ಹೆಚ್.ಎಸ್.ಆರ್. ಬಡಾವಣೆಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಿಸಿರುವ ವಾಣಿಜ್ಯ ಸಂಕೀರ್ಣದ ಜಮೀನಿನ ವಿಸ್ತೀರ್ಣ ಎಷ್ಟು ;

(ಆ) ಇದರಲ್ಲಿ ನಿರ್ಮಿಸಿರುವ ಕಟ್ಟಡದ ವಿಸ್ತೀರ್ಣ ಎಷ್ಟು ; ಈ ಸಂಕೀರ್ಣದಲ್ಲಿರುವ ವಾಣಿಜ್ಯ ಮಳಿಗೆಗಳೆಷ್ಟು ;

(ಇ) ಈ ಪೈಕಿ ಖಾಲಿ ಇರುವ ವಾಣಿಜ್ಯ ಮಳಿಗೆಗಳೆಷ್ಟು ; ವಾಣಿಜ್ಯ ಮಳಿಗೆಗಳಿಗೆ ನಿಗದಿಪಡಿಸಿರುವ ಬಾಡಿಗೆ ಎಷ್ಟು ; ಈ ಬಾಡಿಗೆದಾರರಿಗೆ ವಿಧಿಸಿರುವ ಷರತ್ತುಗಳೇನು ;

(ಈ) ಕೆಲವು ವಾಣಿಜ್ಯ ಮಳಿಗೆಗಳ ಬಾಡಿಗೆದಾರರು ಷರತ್ತುಗಳನ್ನು ಉಲ್ಲಂಘಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದಲ್ಲಿ, ಇವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಾಣಿಜ್ಯ ಮಳಿಗೆದಾರರು, ಬಾಡಿಗೆದಾರರ ಹೆಸರು, ನಿಗದಿಪಡಿಸಿರುವ ಬಾಡಿಗೆ, ಷರತ್ತುಗಳನ್ನು ಉಲ್ಲಂಘಿಸಿರುವವರ ಹೆಸರು ಸಹಿತ ವಿವರಗಳನ್ನು ನೀಡುವುದು)

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

---

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. , ಪ್ರತಿಗಳು 1500